**ಕಲ್ಲಿನ ಕೋರೆ ಪ್ರಾರಂಭಿಸಲು ಪರವಾನಗಿ**

744 - ಶ್ರೀ ರುಕ್ಮಯ್ಯ ಪೂಜಾರಿ (ವಿಟ್ಲ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗಣಿ ಮತ್ತು ಭೂವಿಜ್ಞಾನ ಇಲಾಖೆಯವರು ಕಲ್ಲಿನ ಕೋರೆಗಳನ್ನು ಪ್ರಾರಂಭಿಸಲು ಪರವಾನಗಿಗಳನ್ನು ಕೊಡುವಾಗ ಕಂದಾಯ ಇಲಾಖೆ ಮತ್ತು ಸಂಬಂಧಪಟ್ಟ ಪಂಚಾಯತ್‌ದಿಂದ ಒಪ್ಪಿಗೆ ಪಡೆಯದೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ?*

ಆ) *ಇದರಿಂದ, ಹಳ್ಳಿಗಳಲ್ಲಿ ಸಮಸ್ಯೆಗಳು ನಿರ್ಮಾಣವಾಗುವುದಿಲ್ಲವೇ?*

ಇ) *ಇದನ್ನು ಸರಿಪಡಿಸಲು ಸರಕಾರ ಕೈಗೊಂಡಿರುವ ಕ್ರಮಗಳೇನು?*

ಶ್ರೀ ಜೆ. ಹೆಚ್. ಪಟೇಲ್ (ಮುಖ್ಯಮಂತ್ರಿಗಳು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ

**ಗುಳೇದಗುಡ್ಡ ಮತ ಕ್ಷೇತ್ರದಲ್ಲಿ ಬಸ್‌ನಿಲ್ದಾಣ ನಿರ್ಮಾಣ**

745 - ಶ್ರೀ ರಾಜಶೇಖರ್ ವಿ. ಶೀಲವಂತ (ಗುಳೇದಗುಡ್ಡ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗುಳೇದಗುಡ್ಡ ಮತಕ್ಷೇತ್ರದ ಐಹೊಳೆ, ಗುಡೂರು ಹಾಗೂ ಸುಳೇಭಾವಿ ಗ್ರಾಮಗಳಲ್ಲಿ ಬಸ್ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?*

ಆ) *ಹಾಗಿದ್ದಲ್ಲಿ, ಇದುವರೆಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಇ) *ಇಲ್ಲದಿದ್ದರೆ ಪ್ರಯಾಣಿಕರಿಗೆ ಬೇಸಿಗೆ ಹಾಗೂ ಮಳೆಗಾಲದಲ್ಲಿ ಆಗುವ ತೊಂದರೆ ತಪ್ಪಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?*

ಶ್ರೀ ಪಿ. ಜಿ. ಆರ್. ಸಿಂಧ್ಯ (ಸಾರಿಗೆ ಸಚಿವರು) :

ಅ) ಹೌದು.

ಆ) ಸದರಿ ಉದ್ದೇಶಕ್ಕಾಗಿ ಸೂಕ್ತ ನಿವೇಶನಗಳನ್ನು ಪಡೆಯಲು ಪ್ರಯತ್ನಿಸಲಾಗುತ್ತಿದೆ.

ಇ) ಇದು ಉದ್ಭವಿಸುವುದಿಲ್ಲ.